# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 13.07.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ರಾಜಕಾಲುವೆ ಒತ್ತುವರಿ ತೆರವುಗೊಳಿಸುವ ಕಾರ್ಯಾಚರಣೆ ಮುಂದುವರೆಸಿದ್ದು, ಇಂದು ಬೆಳಿಗ್ಗೆ ಇಟ್ಟಮಡುವಿನಲ್ಲಿ 21 ಮನೆಗಳನ್ನು ತೆರವುಗೊಳಿಸಿದೆ.

ಉಚ್ಛ ನ್ಯಾಯಾಲಯದ ಆದೇಶದಂತೆ ಪದ್ಮನಾಭನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೊಸಕೆರೆಹಳ್ಳಿ ವಾರ್ಡ್ ನಂ.161ರ ಇಟ್ಟಮಡುವಿನಲ್ಲಿರುವ ರಾಜಕಾಲುವೆಯನ್ನು ಒತ್ತುವರಿ ಮಾಡಿಕೊಂಡು ಅಕ್ರಮವಾಗಿ ನಿರ್ಮಿಸಿದ 21 ಮನೆಗಳನ್ನು ಪಾಲಿಕೆಯ ಕಾರ್ಯಪಾಲಕ ಅಭಿಯಂತರರಾದ ಶ್ರೀ ಶ್ರೀಕಂಠೇಗೌಡ ರವರ ನೇತೃತ್ವದಲ್ಲಿ ಸ್ಥಳೀಯ ಪೊಲೀಸ್ ಭದ್ರತೆಯೊಂದಿಗೆ ತೆರವುಗೊಳಿಸಲಾಗಿದೆ.

ರಾಜಕಾಲುವೆ ಮೇಲೆ ಅಕ್ರಮವಾಗಿ ಕಟ್ಟಡಗಳನ್ನು ನಿರ್ಮಿಸಿರುವುದರಿಂದ ಮಳೆ ನೀರು ಸರಾಗವಾಗಿ ಹರಿಯದೇ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದರಿಂದ ಸ್ಥಳೀಯರು ನ್ಯಾಯಾಲಯದ ಮೊರೆ ಹೋಗಿದ್ದರು. ಈ ಸಂಬಂಧ ಒತ್ತುವರಿಯಾದ ಎಲ್ಲಾ ಕಟ್ಟಡಗಳನ್ನು ತೆರವುಗೊಳಿಸಲು ಹೈಕೋರ್ಟ್ ಆದೇಶ ನೀಡಿತ್ತು ಎಂದು ಪಾಲಿಕೆ ಅಭಿಯಂತರರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**